ಅಸಲು ದಾವಾ ಸಂಖ್ಯೆ 270/2016 ಪಿ.ಡಬ್ಲ್ಯೂ 1

ಸಾಕ್ಷಿಯು ದಿನಾಂಕ 20.12.2021 ರಂದು ನ್ಯಾಯಾಲಯಕ್ಕೆ ಹಾಜರಾಗಿದ್ದು ಪ್ರಮಾಣವಚನ ನೀಡಲಾಯಿತು.

ಮುಖ್ಯ ವಿಚಾರಣೆಃ ಶ್ರೀ **KBS** ನ್ಯಾಯಾವಾದಿಗಳಿಂದಃ

ನಾನು ನ್ಯಾಯಾಲಯಕ್ಕೆ ನನ್ನ ಮುಖ್ಯ ವಿಚಾರಣೆಯ ಬದಲಾಗಿ ಪ್ರಮಾಣಪತ್ರವನ್ನು ಸಲ್ಲಿಸಿರುತ್ತೇನೆ. ಅದನ್ನು ನಾನೇ ವಕೀಲರಿಗೆ ಹೇಳಿ ಬರೆಸಿರುತ್ತೇನೆ. ಅದರಲ್ಲಿ ಬರೆದಿರುವ ಎಲ್ಲಾ ವಿಚಾರಗಳು ಸತ್ಯವಾಗಿವೆ, ಅದರಲ್ಲಿರುವ ಅಂಶಗಳನ್ನು ಅರ್ಥೈಸಿಕೊಂಡ ನಂತರ ನಾನು ಅದಕ್ಕೆ ಸಹಿ ಮಾಡಿರುತ್ತೇನೆ. ನಾನು ದಾವೆಯನ್ನು ಹಾಕುವ ಕಾಲಕ್ಕೆ ದಾವೆಯ ಜೊತೆಗೆ ದಾಖಲಾತಿಗಳನ್ನು ಸಲ್ಲಿಸಿರುತ್ತೇನೆ. ಸದರಿ ದಾಖಲೆಗಳನ್ನು ನಿಶಾನೆಗಳಾಗಿ ಗುರುತಿಸಲು ಕೋರುತ್ತೇನೆ.

ಮೂಲ ನೊಂದಾಯಿತವಲ್ಲದ ಕ್ರಯದ ಕರಾರು ಪತ್ರವನ್ನು ಹಾಜರುಪಡಿಸಿದ್ದು ಅದನ್ನು ನಿಪಿ1 ಎಂದು, ಸಾಕ್ಷಿಯು ನಿಪಿ 1 ರಲ್ಲಿರುವ ತನ್ನ ಸಹಿಯನ್ನು ನೋಡಿ ಗುರುತಿಸಿದ್ದು ಅದನ್ನು ನಿಪಿ 1(ಎ) ಎಂದು, ಸಾಕ್ಷಿಯು ನಿಪಿ 1 ರಲ್ಲಿ ಪ್ರತಿವಾದಿಗಳ ಸಹಿಯನ್ನು ನೋಡಿ ಗುರುತಿಸಿದ್ದು ಅವುಗಳನ್ನು ಕ್ರಮವಾಗಿ ನಿಪಿ1(ಬಿ, ಸಿ ಮತ್ತು ಡಿ ) ಎಂದು ಗುರುತಿಸಿದ್ದು, ಷರಾದ ದಾಖಲೆಯನ್ನು ಹಾಜರು ಪಡಿಸಿದ್ದು ಅದನ್ನು ನಿಪಿ.2 ಎಂದು, ಕಾನೂನು ತಿಳುವಳಿಕೆ ಕಛೇರಿ ಪ್ರತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ3 ಎಂದು, ಗಣಕೀಕೃತ ಪಹಣಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ4 ಎಂದು, ಒಟ್ಟು 3 ಅಂಚೆ ರಶೀದಿಗಳನ್ನು ಹಾಜರುಪಡಿಸಿದ್ದು, ಅವುಗಳನ್ನು ನಿಪಿ5 ರಿಂದ 8 ಎಂದು, ಅಂಚೆ ಸ್ವೀಕೃತಿಯನ್ನು ಹಾಜರುಪಡಿಸಿದ್ದು ಅದನ್ನು ನಿಪಿ9 ಎಂದು, ಆರ್.ಎಲ್. ಡಿ ವಾಪಸ್ಸಾದ ಪ್ರತಿಗಳನ್ನು ಹಾಜರು ಪಡಿಸಿದ್ದು ಅವುಗಳನ್ನು ನಿಪಿ10 ಮತ್ತು 11, ಅವುಗಳಲ್ಲಿ ಇದ್ದ ಕಾನೂನು ತಿಳುವಳಿಕೆ ನೋಟಿಸ್ ಅನ್ನು ನಿಪಿ 10(ಎ) ಮತ್ತು 11(ಎ) ಎಂದು ಗುರುತಿಸಲಾಯಿತು.

ಪಾಟೀ ಸವಾಲುಃ ಸವಾಲಿಗೆ ಸಮಯ ಕೋರಿದ್ದು, ಸಮಯ ನೀಡಲಾಯಿತು.

ಸಾ. ಹೇ. ಬೆ. ಮಾಡಿಸಲಾಯಿತು.

ಓ.ಹೇ.ಕೇ.ಸ.ಇದೆ

ಅಪರ ಸಿವಿಲ್ ನ್ಯಾಯಾಧೀಶರು

ನಾಗಮಂಗಲ